# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1718 (2122) |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ ಜಿಲ್ಲೆಯಲ್ಲಿ 2020-21 ಸಾಲಿನಿಂದ 2021-2022 ಸಾಲಿನವರೆಗೆ ಕಾರ್ಮಿಕ ಇಲಾಖೆಯಲ್ಲಿ ಕಾರ್ಮಿಕ ಗೃಹಭಾಗ್ಯ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗಿದೆ; ಒದಗಿಸಿದ್ದಲ್ಲಿ ಫಲಾನುಭವಿವಾರು ವಿವರ ನೀಡುವುದು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಭಿತರಿಗಾಗಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ (ಉದ್ಯೋಗ ಮತ್ತ ಸೇವಾ ಷರತ್ತುಗಳು) ನಿಯಮ, 2006 ರ ನಿಯಮ.42 ರಲ್ಲಿ ಗೃಹ ಭಾಗ್ಯ ಸೌಲಭ್ಯದಡಿ ಮನೆ ಕಟ್ಟಲು ಮುಂಗಡ / ಸಾಲ ರೂಪದಲ್ಲಿ ಸಹಾಯ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ರೂಪರೇಷಗಳನ್ನು ಅಂತಿಮಗೊಳಿಸಬೇಕಾಗಿರುವುದರಿಂದ ಪರಿಶೀಲನೆ ಹಂತದಲ್ಲಿದೆ. |
| ಆ) | 'ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕ ರಹಿತ ರಕ್ಷಣಾ ನಿಧಿ' ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಸಂಗ್ರಹಿಸಲಾದ ಒಟ್ಟು ಮೊತ್ತ ಎಷ್ಟು; ಈ ಹಣವು ಯಾವ ಯೋಜನೆಯಲ್ಲಿ ಉಪಯೋಗಿಸಲಾಗುತ್ತಿದೆ; | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಶೆ. 1 ರಷ್ಟು ಸಂಗ್ರಹವಾಗುವ ಸುಂಕದಿಂದ ಮಂಡಳಿಯ ಸುಂಕ ನಿಧಿಯಲ್ಲಿ ರೂ. 7510.10 ಕೋಟಿ ಮೊತ್ತವು (ಸುಂಕ, ಬಡ್ಡಿ ಮತ್ತು ಕಾರ್ಮಿಕರ ನೋಂದಣಿ ಶುಲ್ಕ ಮತ್ತು ನವೀಕರಣ ಸೇರಿದಂತೆ) ಸಂಗ್ರಹವಾಗಿರುತ್ತದೆ.<br>ಈ ಸುಂಕ ನಿಧಿಯಿಂದ ಮಂಡಳಿಯು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಭಿತರಿಗಾಗಿ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಬಳಸಲಾಗುತ್ತಿದೆ. ಸೌಲಭ್ಯಗಳ ವಿವರವನ್ನು ಅನುಬಂಧದಲ್ಲಿ ಸಲ್ಲಿಸಿದೆ. |

| | | |
|---|---|---|
| ಇ) | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಅಡಿಯಲ್ಲಿ ಎಷ್ಟು ಜನರಿಗೆ ಸ್ಮಾರ್ಟ್ ಕಾರ್ಡ್ ನೀಡಲಾಗಿದೆ? (ತಾಲ್ಲೂಕುವಾರು ವಿವರವಾದ ಮಾಹಿತಿ ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ<br><br>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿಕಾರ್ಮಿಕ"ರನ್ನು ಆನ್‌ಲೈನ್ ಪೋರ್ಟಲ್ Ksuwssb.karnataka.gov.in ಮೂಲಕ ನೋಂದಾಯಿಸಿ ಗುರುತಿನಚೀಟಿ ನೀಡಲಾಗುತ್ತಿದ್ದು, ಸ್ಥಳದಲ್ಲೇ ಗುರುತಿನಚೀಟಿ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಈ ಯೋಜನೆಯಡಿ ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ, ಈವರೆಗೆ 3,942 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ. |

| ಕ್ರ.ಸಂ | ತಾಲ್ಲೂಕು | ಕಾರ್ಮಿಕರ ಸಂಖ್ಯೆ |
|---|---|---|
| 1 | ಔರಾದ್ | 113 |
| 2 | ಬಸವಕಲ್ಯಾಣ | 1165 |
| 3 | ಭಾಲ್ಕಿ | 420 |
| 4 | ಬೀದರ್ | 1633 |
| 5 | ಹುಮ್ನಾಬಾದ್ | 611 |
| | ಒಟ್ಟು | **3942** |

**ಕಾಇ 183 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರ

# ಅನುಬಂಧ

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2122

**ಕರ್ನಾಟಕ ಕಟ್ಟಡ ಮತ್ತು ಇತರೆ ಕಾರ್ಮಿಕ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. 30,000/- ಮತ್ತುಗಂಡು ಮಗುವಿನ ಜನನಕ್ಕೆರೂ.20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆವೆಚ್ಚ:ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | **ತರಗತಿ (ಉತ್ತೀರ್ಣಕ್ಕೆ)** | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತುದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |

| | | |
|---|---|---|
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈದ್ಯಕೀಯಎನ್ ಇಇಟಿ ಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್‌ಅಥವಾ ಸಂಬಂಧಪಟ್ಟಯೂಜಿಕೋರ್ಸ್ | ಸದರಿ<br>ಕೋರ್ಸ್‌ನಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರಕೋರ್ಸ್) | ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್‌ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್‌ರಿಸರ್ಚ್ ಫೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಭಿತರಿಗೆರೂ.300/- ರಿಂದರೂ.10,000/-ವರೆಗೆ
13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ **ರೂ.2,00,000/- ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ **ರೂ.50,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತುಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲುತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕರೂ.6,000/- ಗಳ ಸಹಾಯಧನ.